(ರಮದಾನ್ ತಿಂಗಳ ಕೊನೆಯ) ಹತ್ತು ದಿನಗಳು ಪ್ರಾರಂಭವಾದರೆ, ಅಲ್ಲಾಹನ ಸಂದೇಶವಾಹಕರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ರಾತ್ರಿಯನ್ನು ಜೀವಂತಗೊಳಿಸುತ್ತಿದ್ದರು, ತಮ್ಮ ಕುಟುಂಬವನ್ನು ಎಬ್ಬಿಸುತ್ತಿದ್ದರು, ಪರಿಶ್ರಮಪಡುತ್ತಿದ್ದರು ಮತ್ತು ತಮ್ಮ ಧೋತಿಯನ್ನು ಬಿಗಿಗೊಳಿಸುತ್ತಿದ್ದರು

ಸತ್ಯವಿಶ್ವಾಸಿಗಳ ಮಾತೆ ಆಯಿಶ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ. ಅವರು ಹೇಳಿದರು: "(ರಮದಾನ್ ತಿಂಗಳ ಕೊನೆಯ) ಹತ್ತು ದಿನಗಳು ಪ್ರಾರಂಭವಾದರೆ, ಅಲ್ಲಾಹನ ಸಂದೇಶವಾಹಕರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ರಾತ್ರಿಯನ್ನು ಜೀವಂತಗೊಳಿಸುತ್ತಿದ್ದರು,
ತಮ್ಮ ಕುಟುಂಬವನ್ನು ಎಬ್ಬಿಸುತ್ತಿದ್ದರು, ಪರಿಶ್ರಮಪಡುತ್ತಿದ್ದರು ಮತ್ತು ತಮ್ಮ ಧೋತಿಯನ್ನು ಬಿಗಿಗೊಳಿಸುತ್ತಿದ್ದರು." [صحيح] [متفق عليه]

ರಮದಾನ್ ತಿಂಗಳ ಕೊನೆಯ ಹತ್ತು ದಿನಗಳು ಪ್ರಾರಂಭವಾದರೆ, ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಇಡೀ ರಾತ್ರಿಯನ್ನು ವಿವಿಧ ಸತ್ಕರ್ಮಗಳಿಂದ ಜೀವಂತಗೊಳಿಸುತ್ತಿದ್ದರು. ಅವರು ತಮ್ಮ ಕುಟುಂಬವನ್ನು ನಮಾಝ್ ಮಾಡಲು ಎಬ್ಬಿಸುತ್ತಿದ್ದರು. ಅವರು ಸಾಮಾನ್ಯವಾಗಿ ಮಾಡುತ್ತಿದ್ದಕ್ಕಿಂತ ಹೆಚ್ಚು ಆರಾಧನೆಗಳನ್ನು ಮಾಡುತ್ತಿದ್ದರು. ಅವರು ತಮ್ಮನ್ನು ಸಂಪೂರ್ಣವಾಗಿ ಆರಾಧನೆಗೆ ಅರ್ಪಿಸಿಕೊಳ್ಳುತ್ತಿದ್ದರು ಮತ್ತು ತಮ್ಮ ಪತ್ನಿಯರ ಸಂಪರ್ಕವನ್ನು ಕಡಿದುಕೊಳ್ಳುತ್ತಿದ್ದರು.

http://www.sunnah.global/hadeeth/kn/show/4944